**ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 04.06.2026 ರಂದು ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರಳ ಪರ ಶ್ರೀ. ಹೆಚ್.ಆರ್.ಎಸ್. ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ಅರ್ಜಿದಾರಳು ಇರುತ್ತೇನೆ. ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ನನಗೆ ತಿಳಿದ ಮಾಹಿತಿಯಂತೆ ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು, ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ಈ ಕೆಳಕಂಡಂತೆ ಗುರುತಿಸಲಾಗಿರುತ್ತದೆ.

| | |
|---|---|
| **ನಿ.ಪಿ.01** | ಚುನಾವಣೆಯ ಗುರುತಿನ ಚೀಟಿ ನೋಟರಿ ಪ್ರತಿ |
| **ನಿ.ಪಿ.02** | ಆಧಾರ್ ಕಾರ್ಡ್ ನ ನೋಟರಿ ಪ್ರತಿ |
| **ನಿ.ಪಿ.03** | ಮದುವೆಯ ಆಮಂತ್ರಣ ಪತ್ರಿಕೆ |
| **ನಿ.ಪಿ.04 & 5** | ಬನ್ನೂರು ಪುರಸಭೆಯಿಂದ ಪಡೆದ ಖಾತಾ ದಾಖಲೆಯ ದೃಢೀಕೃತ ಪ್ರತಿ |

ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಕಾಲಾವಕಾಶ ನೀಡಿ ಪ್ರಕರಣವನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿಯಾಗಿದೆ. Sd/-

**(ಸಚಿನ್.ಹೆಚ್.ಆರ್)**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ತಿ.ನರಸೀಪುರ.